# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ಇತರೆ ಪರೀಕ್ಷೆಗಳು), ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ: ಎಸ್.1/ವಾಣಿಜ್ಯ ಪರೀಕ್ಷೆ/ಜನವರಿ-2020/ಖಾ.ಅರ್ಜಿ.ನೋಂ/01/2019-20 ದಿನಾಂಕ: 29.11.2019.

**: ಸುತ್ತೋಲೆ :**

**ವಿಷಯ:** ಜನವರಿ-2020ರ ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

***

ಜನವರಿ 2020ರ ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗಳಾದ ಆಂಗ್ಲ ಮತ್ತು ಕನ್ನಡ ಬೆರಳಚ್ಚು ಪರೀಕ್ಷೆ, ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪರೀಕ್ಷೆ ಹಾಗೂ ಮುದ್ರಣ ವಿಷಯಗಳ ಪರೀಕ್ಷೆಗಳಿಗೆ **ಖಾಸಗಿಯಾಗಿ ತೆಗೆದುಕೊಂಡು ಪರೀಕ್ಷೆಗೆ ಹಾಜರಾಗಲು ಇಚ್ಛಿಸುವ** ಅಭ್ಯರ್ಥಿಗಳು ತಮಗೆ ಹತ್ತಿರವಿರುವ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದಾದರೂ ವಾಣಿಜ್ಯ ಸಂಸ್ಥೆಗಳ ಮೂಲಕ ನಿಗದಿತ ಅರ್ಜಿ ನಮೂನೆಯೊಂದಿಗೆ ತಮ್ಮ ಪ್ರಸ್ತಾವನೆಗಳನ್ನು, ನಿರ್ದೇಶಕರು (ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು-03ರವರಿಗೆ ಕಳುಹಿಸಿ ತಮ್ಮ ಹೆಸರುಗಳನ್ನು ನೊಂದಾಯಿಸಿಕೊಳ್ಳುವುದು ಹಾಗೂ ನೊಂದಣಿ ಪ್ರಮಾಣಪತ್ರಗಳನ್ನು (ಎನ್‌ರೋಲ್‌ಮೆಂಟ್ ಸರ್ಟಿಫಿಕೇಟ್) ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರುಗಳಿಂದ ಪಡೆದು ನಂತರ ಸಂಸ್ಥೆಯ ಮೂಲಕ ಅರ್ಜಿ ಹಾಗೂ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕವೇ ಪರೀಕ್ಷಾ ಮಂಡಳಿಗೆ ಪಾವತಿಸುವುದು.

| ಕ್ರಸಂ. | ವಿವರಗಳು | ದಿನಾಂಕಗಳು |
|---|---|---|
| 1. | ನೊಂದಣಿ ಶುಲ್ಕವನ್ನು ಅಭ್ಯರ್ಥಿಗಳಿಂದ ಸ್ವೀಕರಿಸಲು ಕೊನೆಯ ದಿನಾಂಕ (ಪ್ರತಿ ವಿದ್ಯಾರ್ಥಿಗೆ ರೂ. 180-00 ಮಾತ್ರ) | 10.12.2019 |
| 2. | ನೊಂದಣಿ ಶುಲ್ಕವನ್ನು ನೆಫ್ಟ್ ಚಲನ್ ಮೂಲಕ ಬ್ಯಾಂಕ್‌ಗೆ ಹಣವನ್ನು ತುಂಬುವ ದಿನಾಂಕ | 11.12.2019 |
| 3. | ನೊಂದಣಿ ಅರ್ಜಿ ನಮೂನೆಗಳನ್ನು ಪರೀಕ್ಷಾ ಶುಲ್ಕದೊಂದಿಗೆ ಮಂಡಳಿಗೆ ಕಳುಹಿಸಲು ಕೊನೆಯ ದಿನಾಂಕ | 13.12.2019 |

- ಅಭ್ಯರ್ಥಿಗಳು ಖಾಸಗಿ ನೊಂದಣಿ ಶುಲ್ಕವಾಗಿ ರೂ.180-00(ಒಂದು ನೂರ ಎಂಭತ್ತು ರೂಪಾಯಿಗಳು ಮಾತ್ರ)ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಮಂಡಳಿಯ ಖಾತೆಗೆ ನೆಫ್ಟ್ ಚಲನ್ ಮೂಲಕ ಜಮಾ ಮಾಡುವುದು. ಹಾಗೂ ಚಲನ್ ಪ್ರತಿಯನ್ನು ನಾಮಿನಲ್ ರೋಲ್ ನೊಂದಿಗೆ ಸಲ್ಲಿಸುವುದು. ನೊಂದಣಿ ಮಾಡಲು ಸಲ್ಲಿಸಬೇಕಾದ ಅರ್ಜಿ ಶುಲ್ಕ ಮತ್ತು ಇತರೆ ಅವಶ್ಯಕವಾದ ದಾಖಲೆಗಳನ್ನು ಹತ್ತಿರವಿರುವ ಸರ್ಕಾರದಿಂದ ಮಾನ್ಯತೆ ಪಡೆದ ವಾಣಿಜ್ಯ ಸಂಸ್ಥೆಯ ಮುಖಾಂತರ ಕಳುಹಿಸತಕ್ಕದ್ದು.
- ಈ ಕೆಳಗೆ ಸೂಚಿಸಿರುವ ಪ್ರಕರಣಗಳಲ್ಲಿ ಮಾತ್ರ ಖಾಸಗಿಯಾಗಿ ಈ ಪರೀಕ್ಷೆಗೆ ನೊಂದಾಯಿಸಲು ಅರ್ಹರಾಗಿರುತ್ತಾರೆ.

A. ಅಭ್ಯರ್ಥಿಯು ಯಾವುದಾದರೂ ಮಾನ್ಯತೆ ಪಡೆದ ವಾಣಿಜ್ಯ ಶಾಲೆಯಲ್ಲಿ ಕನಿಷ್ಟ ಎರಡು (2) ವರ್ಷ ಸೇವೆ ಸಲ್ಲಿಸಿದ ಅನುಭವವಿರಬೇಕು. ಅಥವಾ

B. ಯಾವುದೇ ಸರ್ಕಾರಿ/ಸ್ಥಳೀಯ ಸಂಸ್ಥೆ/ರಿಜಿಸ್ಟರ್ಡ್ ಖಾಸಗಿ ಸಂಸ್ಥೆಗಳಲ್ಲಿ ಕನಿಷ್ಠ ಮೂರು ವರ್ಷ ಸೇವೆಯನ್ನು ಸಲ್ಲಿಸಿರಬೇಕು. ಸಂಬಂಧಿಸಿದ ದಾಖಲೆ ಲಗತ್ತಿಸಿರಬೇಕು.

ಈ ಮೇಲ್ಕಂಡ ಎರಡು ವರ್ಗಗಳಲ್ಲದೆ ಬೇರೆಯವರಿಂದ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ಖಾಸಗಿಯಾಗಿ ಬೆರಳಚ್ಚು ಅಥವಾ ಶೀಘ್ರಲಿಪಿ ಪ್ರೌಢ ದರ್ಜೆ ಪರೀಕ್ಷೆಗೆ ಕುಳಿತುಕೊಳ್ಳಲು ಬಯಸುವವರು ಸಂಬಂಧಪಟ್ಟ ವಿಷಯದ ಪ್ರಥಮ ದರ್ಜೆ ಪರೀಕ್ಷೆಯನ್ನು ಒಂದು ವರ್ಷ ಮುಂಚಿತವಾಗಿ ಉತ್ತೀರ್ಣ ಮಾಡಿರಬೇಕು.

- **ಖಾಸಗಿಯಾಗಿ ವಾಣಿಜ್ಯ ಪರೀಕ್ಷೆಗೆ ಕುಳಿತುಕೊಳ್ಳ ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮಾರ್ಚ-2018ರ ಮಾಹೆಯಲ್ಲಿ ಅಥವಾ ಅದಕ್ಕಿಂತ ಮುಂಚಿತವಾಗಿಯೇ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ಹಾಗೂ ಎಸ್.ಎಸ್.ಎಲ್.ಸಿ./ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸುವುದು.**
- ನೊಂದಣಿ ಮಾಡಿಸಲು ಯಾವ ವಾಣಿಜ್ಯ ಸಂಸ್ಥೆಯ ಮೂಲಕ ನೊಂದಣಿ ಅರ್ಜಿಯನ್ನು ಕಳುಹಿಸಿರುತ್ತಾರೆಯೋ, ಅದೇ ವಾಣಿಜ್ಯ ಸಂಸ್ಥೆಗೆ ಅರ್ಹತೆ ಪಡೆದವರ ನೊಂದಣಿ ಪತ್ರವನ್ನು (ಎನ್‌ರೋಲ್‌ಮೆಂಟ್ ಸರ್ಟಿಫೀಕೇಟ್) ಕಳುಹಿಸಲಾಗುತ್ತದೆ.
- ವಾಣಿಜ್ಯ ಸಂಸ್ಥೆಯ ಪ್ರಾಚಾರ್ಯರು ತಮಗೆ ಬಂದ ಎಲ್ಲಾ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನೇರವಾಗಿ ಶ್ರೀಮತಿ ಹೇಮಲತಾ ಡಿ ನಾಯಕ್, ಸಹಾಯಕ ನಿರ್ದೇಶಕರು (ವಾಣಿಜ್ಯ ವಿಭಾಗ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03 ಈ ವಿಳಾಸಕ್ಕೆ ಕಳುಹಿಸತಕ್ಕದ್ದು.
- ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವಾಗ ಮಂಡಳಿಯಿಂದ ನೀಡಲಾದ ನೊಂದಣಿ ಪತ್ರವನ್ನು ನಿಗಧಿತ ಕಾಲಂನಲ್ಲಿ ಅಪ್‌ಲೋಡ್ ಮಾಡಬೇಕು.

ನಿರ್ದೇಶಕರು
(ಇತರೆ ಪರೀಕ್ಷೆಗಳು)

<u>ಪ್ರತಿಗಳನ್ನು :-</u>

1. ನಿರ್ದೇಶಕರು : ಕಾರ್ಯದರ್ಶಿಗಳ ಆಪ್ತ ಶಾಖೆಗೆ.
2. ವಿಭಾಗೀಯ ಮಟ್ಟದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಪದನಿಮಿತ್ತ ಸಹನಿರ್ದೇಶಕರುಗಳಿಗೆ,
3. ಶ್ರೀಮತಿ ವಿಜಯಲಕ್ಷ್ಮಿ, ಹಿರಿಯ ಸಹಾಯಕ ನಿರ್ದೇಶಕರು, ವಾಣಿಜ್ಯ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-01
4. ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಎಲ್ಲಾ ವಾಣಿಜ್ಯ ಶಾಲೆಗಳ ಪ್ರಾಚಾರ್ಯರುಗಳಿಗೆ.
5. ಶಾಖಾಧಿಕಾರಿಗಳು, ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
6. ಕಛೇರಿ ಪ್ರತಿ.